## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 127
2. ಮಾನ್ಯ ಸದಸ್ಯರ ಹೆಸರು : ಶ್ರೀ ಎಂ. ನಾಗರಾಜು(ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 14.02.2023
4. ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಕಬ್ಬು ಬೆಳೆಗಾರರ ಮೂಲ ಸಮಸ್ಯೆಗಳೇನು; ಕಬ್ಬು ಬೆಳೆಗಾರರಿಗೆ ಸಕ್ಕರೆ ಕಾರ್ಖಾನೆಗಳು ತೂಕದಲ್ಲಿ ವ್ಯತ್ಯಾಸಗಳನ್ನು ಉಂಟುಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಎಷ್ಟು ಮತ್ತು ಯಾವ ಯಾವ ಸಕ್ಕರೆ ಕಾರ್ಖಾನೆಗಳಲ್ಲಿ ಕಬ್ಬು ಬೆಳೆಗಾರರಿಗೆ ತೂಕದಲ್ಲಿ ವ್ಯತ್ಯಾಸವಿರುವುದು ಕಂಡುಬಂದಿದೆ; ಅಂತಹ ಕಾರ್ಖಾನೆಗಳಾವುವು ಹಾಗೂ ಅಂತಹ ಕಾರ್ಖಾನೆಗಳ ಮೇಲೆ ಸರ್ಕಾರ ಏನು ಕ್ರಮ ಕೈಗೊಂಡಿದೆ; | ರಾಜ್ಯದ ಕಬ್ಬು ಬೆಳೆಗಾರರಿಗೆ ಸಂಬಂಧಿಸಿದ ಕೆಲವೊಂದು ಸಮಸ್ಯೆಗಳು ಈ ಕೆಳಕಂಡಂತಿವೆ.<br>1. ಕಬ್ಬಿನ ಬೆಲೆಯ ಉತ್ಪಾದನಾ ವೆಚ್ಚ ಹೆಚ್ಚಾಗಿರುವುದರಿಂದ ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಎಫ್.ಆರ್.ಪಿ. ದರದ ಮೇಲೆ ಹೆಚ್ಚುವರಿಯಾಗಿ ಬೇರೆ ರಾಜ್ಯಗಳಲ್ಲಿರುವಂತೆ ರಾಜ್ಯ ಸಲಹಾ ಬೆಲೆ ನಿಗದಿಗೊಳಿಸುವಂತೆ ಬೇಡಿಕೆ ಇರುತ್ತದೆ.<br>2. ಕಾರ್ಖಾನೆಗಳು ಕಬ್ಬಿನ ತೂಕ ಮತ್ತು ಇಳುವರಿಯಲ್ಲಿ ಮೋಸ ಆಗುತ್ತಿರುವ ಬಗ್ಗೆ ದೂರುಗಳಿವೆ.<br>3. ಕಾರ್ಖಾನೆಗಳು ಕಬ್ಬು ಕಟಾವು ಮತ್ತು ಸಾಗಾಣಿಕೆ ವೆಚ್ಚಗಳನ್ನು ಪ್ರತಿ ವರ್ಷ ಹೆಚ್ಚಿಸುತ್ತಿರುವುದರ ಬಗ್ಗೆ.<br>4. ಕಟಾವು ಗ್ಯಾಂಗುಗಳು ಕಬ್ಬು ಬೆಳೆಗಾರ ರೈತರಿಂದ ಪ್ರತಿ ಎಕರೆಗೆ ಇಂತಿಷ್ಟು 'ಲಗಾಣಿ' ಮೊತ್ತವನ್ನು ನಿಯಮಬಾಹಿರವಾಗಿ ಪಡೆಯುತ್ತಿರುವುದರ ಕುರಿತು.<br>5. ರೈತರು ಬೆಳೆದ ಕಬ್ಬನ್ನು ನಾಟಿ ಮಾಡಿದ 12ನೇ ತಿಂಗಳುಗಳಲ್ಲಿ ಕಟಾವು ಮಾಡಬೇಕಿದ್ದು, ಕಾರ್ಖಾನೆಗಳು ವಿಳಂಬವಾಗಿ ಕಟಾವು ಮಾಡುತ್ತಿರುವುದರ ಕುರಿತು.<br>6. ಕಾರ್ಖಾನೆಗಳು ಕಬ್ಬಿನ ಬಿಲ್ಲನ್ನು ಕಬ್ಬು ಸರಬರಾಜು ಮಾಡಿದ 14 ದಿನಗಳ ಒಳಗಾಗಿ ಕಬ್ಬಿನ ಬಿಲ್ಲನ್ನು ಪಾವತಿಸಬೇಕೆಂದು ನಿಯಮವಿದ್ದು, ಕಾರ್ಖಾನೆಗಳು ವಿಳಂಬವಾಗಿ ರೈತರ ಬಿಲ್ಲನ್ನು ಪಾವತಿಸುತ್ತಿರುವುದರ ಬಗ್ಗೆ.<br><br>ಕಬ್ಬು ಬೆಳೆಗಾರರಿಗೆ ಸಕ್ಕರೆ ಕಾರ್ಖಾನೆಗಳು ತೂಕದಲ್ಲಿ ವ್ಯತ್ಯಾಸಗಳನ್ನು ಉಂಟು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ಬಗ್ಗೆ ರೈತ ಸಂಘಟನೆಗಳಿಂದ ಹಲವು ದೂರುಗಳು ಬಂದ ಹಿನ್ನೆಲೆಯಲ್ಲಿ ಹಾಗೂ ಈ ಬಗ್ಗೆ ಸೂಕ್ತ ತನಿಖೆ ನಡೆಸುವಂತೆ ಒತ್ತಾಯಿಸಿದ್ದರಿಂದ ತೂಕ ಮತ್ತು ಅಳತೆ ಇಲಾಖೆ, ಸಾರಿಗೆ ಇಲಾಖೆಯ ಸಹಯೋಗದೊಂದಿಗೆ ಸಕ್ಕರೆ ನಿರ್ದೇಶಕರ ನೇತೃತ್ವದಲ್ಲಿ ರಾಜ್ಯದ 21 ಸಕ್ಕರೆ ಕಾರ್ಖಾನೆಗಳ ಮೇಲೆ ದಿನಾಂಕ:14.12.2022ರಂದು ಏಕಕಾಲಕ್ಕೆ ದಾಳಿ ನಡೆಸಿ ಪರಿಶೀಲಿಸಲಾಗಿರತ್ತದೆ. ದಾಳಿ ನಡೆಸಿದ ಸಮಯದಲ್ಲಿ ಈ ಕಾರ್ಖಾನೆಗಳ ತೂಕದಲ್ಲಿ ಯಾವುದೇ ವ್ಯತ್ಯಾಸ ಕಂಡು ಬಂದಿರುವುದಿಲ್ಲ, ಆದ್ದರಿಂದ ಕಾರ್ಖಾನೆಗಳ ವಿರುದ್ಧ ಕ್ರಮ ಕೈಗೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ. |

....2

| | | |
|---|---|---|
| (ಆ) | ಕಬ್ಬು ಬೆಳೆಗಾರರಿಗೆ ಬೆಂಬಲ ಬೆಲೆ ಹೆಚ್ಚಿಸಲು ಸರ್ಕಾರವು ನಿರ್ಧರಿಸಿದೆಯೇ; ನಿರ್ಧರಿಸಿದ್ದಲ್ಲಿ ಈಗಿರುವ ಬೆಂಬಲ ಬೆಲೆಯನ್ನು ಎಷ್ಟು ನಿರ್ಧರಿಸಲಾಗಿದೆ? | ಕೇಂದ್ರ ಸರ್ಕಾರವು 2022-23ನೇ ಸಕ್ಕರೆ ಹಂಗಾಮಿಗೆ ಶೇ.10.25ರಷ್ಟು ಸಕ್ಕರೆ ಇಳುವರಿಗೆ ಪ್ರತಿ ಮೆಟ್ರಿಕ್ ಟನ್ ಕಬ್ಬಿಗೆ ರೂ. 3050/-ಗಳಷ್ಟು ನ್ಯಾಯಯುತ ಮತ್ತು ಲಾಭದಾಯಕ ಬೆಲೆ (ಎಫ್.ಆರ್.ಪಿ.)ಯನ್ನು ನಿಗದಿಗೊಳಿಸಿರುತ್ತದೆ. ಕೇಂದ್ರ ಸರ್ಕಾರವು ನಿಗದಿಗೊಳಿಸಿರುವ ದರದ ಮೇಲೆ ಹೆಚ್ಚುವರಿ ದರವನ್ನು ರಾಜ್ಯ ಸರ್ಕಾರವು ನಿಗದಿಗೊಳಿಬೇಕೆಂದು ಕಬ್ಬು ಬೆಳೆಗಾರ ರೈತರು ಮತ್ತು ರೈತ ಸಂಘಟನೆಗಳ ಮುಖಂಡರು ಕೋರಿರುವ ಹಿನ್ನೆಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ಡಿಎಸ್‌ಕೆ/ಎಕೆ/01/2022-23 ದಿನಾಂಕ:05.12.2022ರನ್ವಯ, ರಾಜ್ಯದಲ್ಲಿ ಎಥನಾಲ್ ಉತ್ಪಾದಿಸುವ ಎಲ್ಲಾ ಸಕ್ಕರೆ ಕಾರ್ಖಾನೆಗಳು ಕಬ್ಬು ಸರಬರಾಜು ಮಾಡಿದ ರೈತರಿಗೆ ಎಫ್.ಆರ್.ಪಿ. ಜೊತೆಗೆ ಪ್ರತಿ ಮೆಟ್ರಿಕ್ ಟನ್ ಒಂದಕ್ಕೆ ರೂ.50/-ಗಳನ್ನು ಹೆಚ್ಚುವರಿಯಾಗಿ ಪಾವತಿಸಲು ಆದೇಶಿಸಲಾಗಿದೆ.<br><br>ಅದರೊಂದಿಗೆ ಆದೇಶ ಸಂಖ್ಯೆ:ಡಿಎಸ್‌ಕೆ/ಎಸ್‌ಕೆ/04/2022-23, ದಿನಾಂಕ:29.12.2022ರನ್ವಯ, ರಾಜ್ಯದ ಎಲ್ಲಾ ಸಕ್ಕರೆ ಕಾರ್ಖಾನೆಗಳು( ಎಥನಾಲ್ ಉತ್ಪಾದಿಸುವ ಕಾರ್ಖಾನೆಗಳು ಸೇರಿದಂತೆ) ಕಬ್ಬು ಸರಬರಾಜು ಮಾಡಿದ ರೈತರಿಗೆ ಎಫ್.ಆರ್.ಪಿ. ಜೊತೆಗೆ ಪ್ರತಿ ಮೆಟ್ರಿಕ್ ಟನ್ ಒಂದಕ್ಕೆ ರೂ.100/-ಗಳನ್ನು ಹೆಚ್ಚುವರಿಯಾಗಿ ಪಾವತಿಸಲು ಆದೇಶಿಸಲಾಗಿದೆ.<br><br>ಅಂದರೆ ಪ್ರಸಕ್ತ ಸಾಲಿನಲ್ಲಿ ಎಫ್.ಆರ್.ಪಿ. ದರಕ್ಕೂ ಮೇಲ್ಪಟ್ಟು ಪ್ರತಿ ಮೆಟ್ರಿಕ್ ಟನ್ ಒಂದಕ್ಕೆ ರೂ.150/-ಗಳನ್ನು ಹೆಚ್ಚುವರಿಯಾಗಿ ಪಾವತಿಸಲು ಆದೇಶಿಸಲಾಗಿದೆ. |

ಸಂಖ್ಯೆ: ಸಿಐ 26ಎಸ್‌ಜಿಎಫ್ 2023

(ಶಂಕರ.ಬ.ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು